ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಬೆಂಗಳೂರು ನಗರದಲ್ಲಿ ಅನಧಿಕೃತ ನಿವೇಶನಗಳು/ಬಡಾವಣೆಗಳ ಬಗ್ಗೆ

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-

1227 (1500) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರ ಜಿಲ್ಲೆಯ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಕಂದಾಯ ಭೂಮಿಯು ಭೂ ಪರಿವರ್ತನೆಯಾಗದೆ ಅನಧಿಕೃತವಾಗಿ ಬಡಾವಣೆಗಳು/ನಿವೇಶನಗಳನ್ನು ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ವಾರ್ಡ್‌ಗಳಲ್ಲಿ ಭೂ ಪರಿವರ್ತನೆಯಾಗದೆ ಅನಧಿಕೃತವಾಗಿ ಕಂದಾಯ ಭೂಮಿಗಳಲ್ಲಿ ಬಡಾವಣೆ/ಮನೆಗಳು ನಿರ್ಮಾಣವಾಗಿವೆ ; (ಮಾಹಿತಿ ನೀಡುವುದು)

(ಇ) ಕಂದಾಯ ಭೂಮಿಗಳ ಮೇಲೆ ಅನಧಿಕೃತವಾಗಿ ನಿರ್ಮಾಣವಾಗಿರುವ ಮನೆಗಳು ಹಾಗೂ ಅಭಿವೃದ್ಧಿಯಾಗಿರುವ ಬಡಾವಣೆಗಳ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ವಿವರ ನೀಡುವುದು)